ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/03/ಎಲ್ಆರ್‌ಡಿಸಿ/2017-18 / 544

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560 001
ದಿನಾಂಕ:05-06-2017

## -: ಸುತ್ತೋಲೆ :-

ವಿಷಯ: ಕನ್ನಡ ಜಾನಪದ ಪರಿಷತ್ತಿನ " **ವಿಕಾಸಕ್ಕಾಗಿ ಜಾನಪದ** " ಕಾರ್ಯಕ್ರಮವನ್ನು ರಾಜ್ಯದ ಎಲ್ಲಾ ಡಿಪ್ಲೋಮಾ ಕಾಲೇಜುಗಳಲ್ಲಿ ನಡೆಸಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ: ಅಧ್ಯಕ್ಷರು, ಕನ್ನಡ ಜಾನಪದ ಪರಿಷತ್, ಬೆಂಗಳೂರು ಇವರ ಮನವಿ ಪತ್ರ ಸಂಖ್ಯೆ: ಕಜಾಪ/117/ವಿಜಾ/20117, ದಿನಾಂಕ:11-05-2017.

*****

ರಾಜ್ಯದ ಎಲ್ಲಾ ಸರ್ಕಾರಿ/ ಅನುದಾನಿತ/ ಖಾಸಗಿ/ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳಲ್ಲಿ ಜಾನಪದ ದಿಗ್ಗಜರ, ಕಲಾವಿದರ, ಕಲಾಪ್ರಕಾರರ ಕುರಿತು ವಿಚಾರ ಸಂಕೀರಣ ಕಮ್ಮಟ ಇತ್ಯಾದಿ ಜಾನಪದ ಚಟುವಟಿಕೆಗಳನ್ನು ಆಯೋಜಿಸುವ ಮೂಲಕ ವಿದ್ಯಾರ್ಥಿಗಳಿಗೆ ನಮ್ಮ ಸಂಸ್ಕೃತಿಯ ಮೂಲಬೇರಾದ ಜಾನಪದದ ಪರಿಚಯ ಹಾಗೂ ಜಾಗೃತಿಯನ್ನು ಮೂಡಿಸುವ ನಿಟ್ಟಿನಲ್ಲಿ " **ವಿಕಾಸಕ್ಕಾಗಿ ಜಾನಪದ** " ಎಂಬ ಶೀರ್ಷಿಕೆಯಡಿ ಜಾನಪದ ಕಲಾ ಪ್ರಕಾರಗಳಾದ ಡೊಳ್ಳುಕುಣಿತ, ಪಟ್ಟಕುಣಿತ, ಕಂಸಾಳೆ, ಗೊರವರ ಕುಣಿತ, ಕೋಲಾಟ, ಜಾನಪದ ಗೀತೆಯ ಪ್ರಕಾರಗಳಾದ ಸೋಬಾನೆಪದ, ಬೀಸುಕಳ್ಳಿನಪದ, ಲಾವಣಿ, ಗೀಗಿಪದ, ಜಾನಪದದ ಮಹಾಕಾವ್ಯಗಳ ಬಿಡಿ ಗೀತೆಗಳ ಕುರಿತು ತರಬೇತಿಯನ್ನು ನೀಡಲಾಗುವುದು. ಇದರಿಂದ ವಿದ್ಯಾರ್ಥಿಗಳಿಗೆ ಅವರು ಭಾಗವಹಿಸುವ ವಿಶ್ವವಿದ್ಯಾಲ ಮಟ್ಟದ ಯುವಜನೋತ್ಸವ ಹಾಗೂ ಇತರೆ ಸ್ಪರ್ಧೆಗಳಿಗೆ ಅನುಕೂಲವಾಗಲಿದ್ದು, ಈ ಬಗ್ಗೆ ರಾಜ್ಯದ ಎಲ್ಲಾ ಸರ್ಕಾರಿ/ ಅನುದಾನಿತ/ ಖಾಸಗಿ/ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ಸುತ್ತೋಲೆಯ ಮೂಲಕ ಕಾರ್ಯಕ್ರಮವನ್ನು ಏರ್ಪಡಿಸಲು ಅನುಮತಿ ನೀಡುವಂತೆ ನಿರ್ದೇಶಿಸಲು ಅಧ್ಯಕ್ಷರು, ಕನ್ನಡ ಜಾನಪದ ಪರಿಷತ್, ಬೆಂಗಳೂರು ಇವರು ಕೋರಿರುತ್ತಾರೆ.

ಈ ಸಂಬಂಧ, ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯ ರಾಜ್ಯದ ಎಲ್ಲಾ ಸರ್ಕಾರಿ/ ಅನುದಾನಿತ/ ಖಾಸಗಿ/ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳಲ್ಲಿ " **ವಿಕಾಸಕ್ಕಾಗಿ ಜಾನಪದ** " ಕಾರ್ಯಕ್ರಮವನ್ನು ಆಯೋಜಿಸಲು ಅಗತ್ಯ ಸಹಕಾರ ನೀಡುವಂತೆ ಸಂಸ್ಥೆಯ ಪ್ರಾಚಾರ್ಯರುಗಳಿಗೆ ಈ ಮೂಲಕ ಸೂಚಿಸಲಾಗಿದೆ.

ಹೆಚ್ಚಿನ ವಿವರಗಳಿಗಾಗಿ ಕನ್ನಡ ಜಾನಪದ ಪರಿಷತ್‌ನ ರಾಜ್ಯ ಕಾರ್ಯಾಧ್ಯಕ್ಷರಾದ ಡಾ॥ ಎಸ್. ಬಾಲಾಜಿ. ದೂರವಾಣಿ ಸಂ: 9900074442, ಇ-ಮೇಲ್, janapadaprapancha@gmail.com ನ್ನು ಸಂಪರ್ಕಿಸಬಹುದಾಗಿದೆ.

ಜಂಟಿ ನಿರ್ದೇಶಕರು(ಪಿ.ಡಿ.ಸಿ.) 5/6/17

ಇವರಿಗೆ,

1. ರಾಜ್ಯದ ಎಲ್ಲಾ ಸರ್ಕಾರಿ/ ಅನುದಾನಿತ/ ಖಾಸಗಿ/ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮಕ್ಕಾಗಿ.
2. ಇ-ಗೌರ್ವನೆನ್ಸ್ ವಿಭಾಗಕ್ಕೆ ಸೂಕ್ತ ಕ್ರಮಕ್ಕಾಗಿ.

ಪ್ರತಿ, ಅಧ್ಯಕ್ಷರು, ಕನ್ನಡ ಜಾನಪದ ಪರಿಷತ್, ನಂ: 36/88, ಸ್ವತಂತ್ರ ಯೋಧರ ನಗರ, ಲಗ್ಗೆರೆ ಹೊರವರ್ತುಲ ರಸ್ತೆ, ಬೆಂಗಳೂರು-560058, ಇವರ ಮಾಹಿತಿಗಾಗಿ.